**All India Radio: Bangalore**
**National Bulletin In Kannada**
**07.04.2026 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.04.2026 13.10 hrs**

**<>><><*><><<>**

ಮುಖ್ಯಾಂಶಗಳು

**೧. ವಲಸೆ ಕಾರ್ಮಿಕರಿಗೆ ನೆರವಾಗಲು ೫ ಕೆ.ಜಿ. ಎಲ್‌ಪಿಜಿ ಸಿಲಿಂಡರ್‌ಗಳ ದಿನನಿತ್ಯದ ಹಂಚಿಕೆ ದ್ವಿಗುಣಗೊಳಿಸಲು ಕೇಂದ್ರ ಸರ್ಕಾರ ನಿರ್ಧಾರ**

**೨. ಅಸ್ಸಾಂ, ಕೇರಳ, ಪುದುಚೇರಿ ವಿಧಾನಸಭಾ ಚುನಾವಣೆ ; ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ**

**೩. ಇಂದು ವಿಶ್ವ ಆರೋಗ್ಯ ದಿನ ; ಆರೋಗ್ಯ ವ್ಯವಸ್ಥೆ ಬಲಪಡಿಸಲು ಕೈಜೋಡಿಸುವಂತೆ ನಾಗರಿಕರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ**

**೪. ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್ ಶಿಪ್‌ಗೆ ಚೀನಾದಲ್ಲಿಂದು ಚಾಲನೆ ; ಭಾರತೀಯ ಶೆಟ್ಲರ್‌ಗಳು ಕಣದಲ್ಲಿ**

**<>><><*><><<>**

ದೇಶಾದ್ಯಂತ ಇರುವ ವಲಸೆ ಕಾರ್ಮಿಕರಿಗೆ ವಿತರಿಸಲಾಗುವ ೫ ಕೆ.ಜಿ. ತೂಕದ ಎಲ್‌ಪಿಜಿ ಸಿಲಿಂಡರ್‌ಗಳ ದಿನ ನಿತ್ಯದ ಹಂಚಿಕೆಯನ್ನು ದುಪ್ಪಟ್ಟುಗೊಳಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಪೆಟ್ರೋಲಿಯಂ ಸಚಿವಾಲಯ ಈ ಆದೇಶ ಕಳೆದ ಮಾರ್ಚ್‌ನಲ್ಲಿ ನಿಗದಿಪಡಿಸಿದ್ದ ಶೇಕಡ ೨೦ರಷ್ಟು ಮಿತಿಯನ್ನು ಮೀರಿ ಹೆಚ್ಚಿನ ಪೂರೈಕೆಗೆ ಅವಕಾಶ ನೀಡಿದೆ. ತೈಲ ಮಾರುಕಟ್ಟೆ ಕಂಪನಿಗಳ ಸಹಯೋಗದೊಂದಿಗೆ ರಾಜ್ಯ ಸರ್ಕಾರಗಳ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಗಳು ಈ ಸಿಲಿಂಡರ್‌ಗಳನ್ನ ವಲಸೆ ಕಾರ್ಮಿಕರಿಗೆ ಮಾತ್ರ ವಿತರಿಸಲಿವೆ. ಪ್ರಸ್ತುತ ಜಾಗತಿಕ ವಿದ್ಯಮಾನಗಳ ನಡುವೆ ಎಲ್‌ಪಿಜಿ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಿಲ್ಲ ಎಂದು ಸ್ಪಷ್ಟಪಡಿಸಿರುವ ಸರ್ಕಾರ ಇಂಧನ ಉಳಿತಾಯ ಮತ್ತು ಸಮರ್ಪಕ ಬಳಕೆಗೆ ಪೂರಕವಾಗಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಬುಕ್ಕಿಂಗ್ ಅವಧಿಯನ್ನು ಕ್ರಮವಾಗಿ ೨೫ ಮತ್ತು ೪೫ ದಿನಗಳಿಗೆ ವಿಸ್ತರಿಸಲಾಗಿದೆ.

**<>><><*><><<>**

ಅಸ್ಸಾಂ, ಕೇರಳ ಮತ್ತು ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿಯ ವಿಧಾನಸಭಾ ಚುನಾವಣೆಯ ಬಹಿರಂಗ ಪ್ರಚಾರವು ಇಂದು ಸಂಜೆ ಕೊನೆಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ನಾಯಕರು ಮತದಾರರನ್ನು ಸೆಳೆಯಲು ಕೊನೆಯ ಕ್ಷಣದ ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ಅಸ್ಸಾಂನ ೧೨೬, ಕೇರಳದ ೧೪೦ ಮತ್ತು ಪುದುಚೇರಿಯ ೩೦ ಸ್ಥಾನಗಳಿಗೆ ಇದೇ ೯ ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ಅಸ್ಸಾಂನ ಪಥರ್ ಕಾಂಡಿಯಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಲ್ಗೊಂಡರು. ಈ ವೇಳೆ ಅವರು, ಗಡಿ ನುಸುಳುವಿಕೆ ತಡೆಗೆ ತಮ್ಮ ಪಕ್ಷ ಬದ್ಧವಾಗಿದ್ದು, ಪಶ್ಚಿಮ ಬಂಗಾಳದಲ್ಲಿ ಅಧಿಕಾರಕ್ಕೆ ಬಂದರೆ ಎಲ್ಲ ನುಸುಳುಕೋರರನ್ನು ಅವರ ದೇಶಗಳಿಗೆ ಮರಳಿ ಕಳುಹಿಸಲಾಗುವುದು ಎಂದು ಆಶ್ವಾಸನೆ ನೀಡಿದರು.
ಕೇರಳದ ಕಲ್ಪೆಟ್ಟಾದಲ್ಲಿ ಇಂದು ಮುಂಜಾನೆ ಹಿರಿಯ ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ವಾದ್ರಾ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ಅವರು, ಎಲ್‌ಡಿಎಫ್ ಸರ್ಕಾರಾವಧಿಯಲ್ಲಿ ಜನರ ಸಮಸ್ಯೆಗಳು ಮತ್ತಷ್ಟು ಹೆಚ್ಚಾಗಿವೆ ಎಂದು ಆರೋಪಿಸಿದರು. ಪುದುಚೇರಿಯಲ್ಲಿ ಹಿರಿಯ ಬಿಜೆಪಿ ನಾಯಕ ಹಾಗೂ ಕೇಂದ್ರ ಸಚಿವ ಜೆ.ಪಿ.ನಡ್ಡಾ, ಡಿಎಂಕೆ ನಾಯಕ ಮತ್ತು ತಮಿಳುನಾಡು ಉಪಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಸೇರಿದಂತೆ ಹಲವು ರಾಜಕೀಯ ಪಕ್ಷಗಳ ಮುಖಂಡರು ತಮ್ಮ ತಮ್ಮ ಅಭ್ಯರ್ಥಿಗಳ ಪರವಾಗಿ ಚುನಾವಣಾ ಪ್ರಚಾರ ಕಾರ್ಯದಲ್ಲಿ ತೊಡಗಲಿದ್ದಾರೆ.

**<>><><*><><<>**

ಉತ್ತಮ ಆರೋಗ್ಯ ಪದ್ಧತಿಗಳ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇಂದು ವಿಶ್ವ ಆರೋಗ್ಯ ದಿನವನ್ನು ಆಚರಿಸಲಾಗುತ್ತಿದೆ. ಆರೋಗ್ಯಕ್ಕಾಗಿ ಜೊತೆಗೂಡಿ, ವಿಜ್ಞಾನದ ಜೊತೆ ನಿಲ್ಲಿ ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ. ೧೯೪೮ರ ಏಪ್ರಿಲ್ ೭ರಂದು ವಿಶ್ವ ಆರೋಗ್ಯ ಸಂಸ್ಥೆ ಡಬ್ಲ್ಯು.ಹೆಚ್.ಒ ಸ್ಥಾಪನೆಗೊಂಡ ದಿನದ ಸ್ಮರಣಾರ್ಥ ಈ ದಿನವನ್ನು ಇಂದು ವಿಶ್ವಾದ್ಯಂತ ಆಚರಿಸಲಾಗುತ್ತದೆ. ವಿಶ್ವ ಆರೋಗ್ಯ ದಿನದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಆರೋಗ್ಯ ಕಾರ್ಯಕರ್ತರು ಹಾಗೂ ಜಾಗತಿಕ ಜನಾರೋಗ್ಯದ ಸುಧಾರಣೆಗೆ ಶ್ರಮಿಸುತ್ತಿರುವ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಪ್ರತಿಯೊಬ್ಬ ವ್ಯಕ್ತಿಯ ಕ್ಷೇಮಕ್ಕೆ ಆದ್ಯತೆ ನೀಡಲು ಮತ್ತು ಆರೋಗ್ಯ

ವ್ಯವಸ್ಥೆಯನ್ನು ಬಲಪಡಿಸಲು ಒಗ್ಗೂಡಿ ಕೆಲಸ ಮಾಡಲು ಕರೆ ನೀಡಿದ್ದಾರೆ. ವಿಶ್ವ ಆರೋಗ್ಯ ದಿನದ ಸಂದರ್ಭದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ, ಎಲ್ಲಾ ವೈದ್ಯರು, ದಾದಿಯರು ಮತ್ತು ಮುಂಚೂಣಿ ಕಾರ್ಯಕರ್ತರಿಗೆ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ. ಅವರ ಸಮರ್ಪಣೆ ದೇಶದ ಆರೋಗ್ಯ ಸೇವೆ ವ್ಯವಸ್ಥೆಯನ್ನು ಬಲಿಷ್ಠವಾಗಿಟ್ಟಿದೆ ಎಂದಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಅವರು, ಈ ದಿನ ನಾಗರಿಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಲು ಮತ್ತು ಸಮತೋಲಿತ ಜೀವನಶೈಲಿ ಅನುಸರಿಸಲು ಉತ್ತೇಜಿಸುತ್ತದೆ. ಆರೋಗ್ಯ ರಕ್ಷಣೆಗೆ ದೇಶ ಆಧುನಿಕ ವಿಜ್ಞಾನದೊಂದಿಗೆ ಪ್ರಾಚೀನ ಜ್ಞಾನವನ್ನು ಸಂಯೋಜಿಸುವ ವಿಧಾನವನ್ನು ಅನುಸರಿಸುತ್ತದೆ. ಆ ಮೂಲಕ ಕೇವಲ ಮನೆಯಲ್ಲಿ ಮಾತ್ತವಲ್ಲದೇ ಜಗತ್ತಿನಾದ್ಯಂತ ಜೀವನವನ್ನು ಸುಧಾರಿಸಲು ಸಹಾಯ ಮಾಡುತ್ತದೆ ಎಂದು ತಿಳಿಸಿದ್ದಾರೆ.

<>><><*><><<>

ಭಾರತ ಮತ್ತು ಭೂತಾನ್ ನಡುವಿನ ಸುದೀರ್ಘ ಅಭಿವೃದ್ಧಿ ಪಾಲುದಾರಿಕೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಭೂತಾನ್‌ನ ೧೩ನೇ ಪಂಚವಾರ್ಷಿಕ ಯೋಜನೆಯ ವಿವಿಧ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಭಾರತ ಸರ್ಕಾರ ಇಂದು ೪೨.೩ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ. ಭೂತಾನ್ ರಾಜಧಾನಿ ಥಿಂಪುವಿನಲ್ಲಿ ನಡೆದ ೧೭ನೇ ಮಾಸಿಕ ಸಮನ್ವಯ ಸಭೆಯಲ್ಲಿ ಭಾರತದ ಉಪರಾಯಭಾರಿ ಅನಿಕೇತ್ ಗೋವಿಂದ್ ಮಾಂಡವ ಗಣೆ ಈ ಮೊತ್ತದ ಚೆಕ್‌ಅನ್ನು ಭೂತಾನ್ ಹಣಕಾಸು ಸಚಿವಾಲಯಕ್ಕೆ ಹಸ್ತಾಂತರಿಸಿದರು. ಈ ಧನ ಸಹಾಯ ಮುಖ್ಯವಾಗಿ ಭೂತಾನ್‌ನ ಮೂಲಸೌಕರ್ಯಾಭಿವೃದ್ಧಿ, ಆಧುನಿಕ ಖುರು ಕಯೆನ್ ಫೆನ್ ಸೇತುವೆ ನಿರ್ಮಾಣ ಹಾಗೂ ಹೆದ್ದಾರಿ ರಸ್ತೆ ಮೇಲ್ದರ್ಜೆಗೇರಿಸುವ ಯೋಜನೆಯನ್ನು ಒಳಗೊಂಡಿದೆ. ಇದರ ಜೊತೆಗೆ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿಗೂ ಹೆಚ್ಚಿನ ಒತ್ತು ನೀಡಲಾಗಿದೆ. ಪಂಚವಾರ್ಷಿಕ ಯೋಜನೆಗೆ ಒಟ್ಟು ೧೦ ಸಾವಿರ ಕೋಟಿ ರೂಪಾಯಿಗಳ ನೆರವು ನೀಡಲು ಭಾರತ ಬದ್ಧವಾಗಿದ್ದು, ಉಭಯ ರಾಷ್ಟ್ರಗಳ ನಡುವಿನ ಬಾಂಧವ್ಯ ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವ ಆಶಯ ಹೊಂದಿದೆ.

<>><><*><><<>

ಇರಾನ್‌ನ ಇಂಧನ ಮೂಲಸೌಕರ್ಯದ ಮೇಲೆ ಇಸ್ರೇಲ್ ನಿನ್ನೆ ದಾಳಿ ನಡೆಸಿದ್ದರಿಂದ ಪಶ್ಚಿಮ ಏಷ್ಯಾದ್ಯಂತ ಉದ್ವಿಗ್ನತೆ ಮತ್ತಷ್ಟು ಉಲ್ಬಣಗೊಂಡಿದೆ. ದೇಶದ ಅತಿದೊಡ್ಡ ಅನಿಲ ಸೌಲಭ್ಯವಾದ ಅಸಲುಯೆ ಯಲ್ಲಿರುವ ಇರನ್‌ನ ದಕ್ಷಿಣ ಪಾರ್ಸ್ ಅನಿಲ ಕ್ಷೇತ್ರದ ಮೇಲೆ ಇಸ್ರೇಲ್ ದಾಳಿ ಮಾಡಿದೆ. ಈ ಬೆಳವಣಿಗೆ ಪ್ರತಿಕಾರದ ಆತಂಕದ ಜೊತೆಗೆ ಜಾಗತಿಕ ಇಂಧನ ಪೂರೈಕೆಗೆ ಅಡ್ಡಿಯಾಗುವ ಸಾಧ್ಯತೆಯನ್ನು ಹೆಚ್ಚಿಸಿದೆ. ಸೌದಿ ಅರೇಬಿಯಾದಲ್ಲಿನ ಕ್ಷಿಪಣಿ ತಡೆಗಟ್ಟುವಿಕೆ, ಅಲ್ ಜುಬೇಲ್ ನಲ್ಲಿನ ಬೆಂಕಿ ಮತ್ತು ಇರಾನ್‌ನ ಇಂಧನ ಸೌಲಭ್ಯಗಳ ಮೇಲಿನ ದಾಳಿಗಳು ಪಶ್ಚಿಮ ಏಷ್ಯಾದ್ಯಂತ ನಿಣಾರ್ಯಕ ಮೂಲಸೌಕರ್ಯಗಳಿಗೆ ಹೆಚ್ಚುತ್ತಿರುವ ಅಪಾಯಕ್ಕೆ ಪುಷ್ಠಿ ನೀಡಿವೆ.

<>><><*><><<>

ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ನಾಳೆಯಿಂದ ಅಮೆರಿಕದ ವಾಷಿಂಗ್ಟನ್ ಡಿಸಿಯಲ್ಲಿ ಮೂರು ದಿನಗಳ ಕಾಲ ಪ್ರವಾಸ ಕೈಗೊಂಡಿದ್ದಾರೆ. ತಮ್ಮ ಭೇಟಿಯ ವೇಳೆ ಅವರು, ಅಮೆರಿಕದ ಹಿರಿಯ ಆಡಳಿತಾಧಿಕಾರಿಗಳೊಂದಿಗೆ ವ್ಯಾಪಾರ, ರಕ್ಷಣೆ, ವಿಜ್ಞಾನ, ತಂತ್ರಜ್ಞಾನ ಹಾಗೂ ಪರಸ್ಪರ ಹಿತಾಸಕ್ತಿಯ ಜಾಗತಿಕ ಹಾಗೂ ಪ್ರಾದೇಶಿಕ ಬೆಳವಣಿಗೆಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ಸಮಾಲೋಚನೆ ನಡೆಸಲಿದ್ದಾರೆ. ಈ ಭೇಟಿ ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯ ಸಂಬಂಧ ಮತ್ತು ಬೆಳೆಯುತ್ತಿರುವ ಸಹಕಾರದ ಪರಿಶೀಲನೆ ನಡೆಸಲು ಸಹಕಾರಿಯಾಗಲಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<>><><*><><<>

ಪಶ್ಚಿಮ-ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಸುದ್ದಿವಾಹಿನಿಗಳು ಉತ್ಪೇಕ್ಷಾರ್ಹ ಮತ್ತು ಸಾರ್ವಜನಿಕರಲ್ಲಿ ಆತಂಕ ಮೂಡಿಸುವ ವರದಿಗಾರಿಕೆಯನ್ನು ತಡೆಗಟ್ಟಲು ಕೇಂದ್ರ ಮಾಹಿತಿ ಮತ್ತು ಪ್ರಚಾರ ಸಚಿವಾಲಯ ಸುದ್ದಿವಾಹಿನಿಗಳ ಟಿಆರ್‌ಪಿ ಪ್ರಕಟಿಸದಂತೆ - ಪ್ರಚಾರ ಪ್ರೇಕ್ಷಕರ ಸಂಶೋಧನಾ ಮಂಡಳಿ-ಬಿಎಆರ್‌ಸಿ ಸಂಸ್ಥೆಗೆ ನೀಡಿದ ಸೂಚನೆಯನ್ನು ಮುಂದಿನ ೪ ವಾರಗಳವರೆಗೆ ಅಥವಾ ಮುಂದಿನ ಆದೇಶದವರೆಗೆ ವಿಸ್ತರಿಸಿದೆ. ಕೆಲ ಸುದ್ದಿ ವಾಹಿನಿಗಳು ಟಿಆರ್‌ಪಿಗಾಗಿ ಸಂವೇದನಾ ಶೀಲ ಮತ್ತು ವ್ಯೂಹಾತ್ಮಕ ವರದಿಗಳನ್ನು ನೀಡುತ್ತಿದ್ದು, ಇದು ಆ ಪ್ರದೇಶಗಳಲ್ಲಿ ನೆಲೆಸಿರುವ ಭಾರತೀಯರ ಕುಟುಂಬಗಳಲ್ಲಿ ಮತ್ತು ಸಾರ್ವಜನಿಕರಲ್ಲಿ ಅನಗತ್ಯ ಆತಂಕ ಮೂಡಿಸುತ್ತಿದೆ ಎಂದು ಸಚಿವಾಲಯ ಅಭಿಪ್ರಾಯಪಟ್ಟಿದೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯ ಹಿನ್ನೆಲೆಯಲ್ಲಿ ಪ್ರಮುಖ ಪೆಟ್ರೊ ಕೆಮಿಕಲ್ ಉತ್ಪನ್ನಗಳ ಮೇಲಿನ ಪೂರ್ಣ ಕಸ್ಟಮ್ಸ್ ಸುಂಕ ವಿನಾಯಿತಿಯನ್ನು ಈ ವರ್ಷದ ಜೂನ್ ೩೦ರವರೆಗೆ ನೀಡಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ದೇಶೀಯ ಕೈಗಾರಿಕೆಗಳಿಗೆ ಅಗತ್ಯವಾದ ಕಚ್ಚಾವಸ್ತುಗಳ ಪೂರೈಕೆ ಮತ್ತು ಮಾರುಕಟ್ಟೆ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಈ ತಾತ್ಕಾಲಿಕ ಕ್ರಮ ಕೈಗೊಳ್ಳಲಾಗಿದೆ.

**<><><*><><>**

ಚೀನಾದ ನಿಂಗ್ಬೊನಲ್ಲಿ ಇಂದಿನಿಂದ ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್ ಆರಂಭಗೊಂಡಿದೆ. ಭಾರತದ ಪರವಾಗಿ ಪುರುಷರ ಸಿಂಗಲ್ಸ್‌ನಲ್ಲಿ ಲಕ್ಷ್ಯಸೇನ್, ಕಿಡಂಬಿ ಶ್ರೀಕಾಂತ್, ಎಚ್.ಎಸ್.ಪ್ರಣಯ್, ಕನ್ನಡಿಗ ಆಯುಷ್ ಶೆಟ್ಟಿ, ಮಹಿಳಾ ಸಿಂಗಲ್ಸ್‌ನಲ್ಲಿ ಪಿ.ವಿ.ಸಿಂಧು, ಉನ್ನತಿ ಹೂಡ, ತಾನ್ವಿ ಶರ್ಮ, ಮಾಳವಿಕ ಬನ್ಸೂರ್ ಕಣಕ್ಕಿಳಿಯಲಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ ><><<>**